ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ಬೀದರ್ ಜಿಲ್ಲೆಯ ತಹಶೀಲ್ದಾರ ಕಛೇರಿಗಳಲ್ಲಿ ಪತ್ರಗಳಿಗೆ ಆಗುತ್ತಿರುವ ವಿಳಂಬದ ಬಗ್ಗೆ

ಶ್ರೀರಘುನಾಥರಾವ್‌ಮಲ್ಕಾಪೂರೆ(ವಿಧಾನಸಭೆಯಿಂದಚುನಾಯಿತರಾದವರು):-

632 (864) ಮಾನ್ಯ ಕಂದಾಯ ಸಚಿವರು ಈ ವಿಷಯಗಳÀನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯ ಎಲ್ಲಾ ತಾಲ್ಲೂಕಿನ ತಹಶೀಲ್ದಾರರ/ನಾಡ ಕಛೇರಿಗಳಲ್ಲಿ ಸಾರ್ವಜನಿಕರಿಗೂ ಮತ್ತು ರೈತರಿಗೂ ತಮ್ಮ ಜಮೀನಿನ ಪಹಣಿ ಮತ್ತು ಇತರೆ ಪತ್ರಿಕೆ ಪಡೆದುಕೊಳ್ಳಲು ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; (ಸ್ಪಷ್ಟ ಮಾಹಿತಿ ನೀಡುವುದು)

(ಆ) ಬಂದಿದ್ದರೆ, ಸರ್ಕಾರವು ಕೂಡಲೇ ಇದರ ನಿವಾರಣೆಗೆ ಯಾವ ಯಾವ ಕ್ರಮ ಕೈಗೊಂಡಿದೆ ; (ಮಾಹಿತಿ ಒದಗಿಸುವುದು)

(ಇ) ಅರ್ಜಿ ಸಲ್ಲಿಸಿದ ಕೂಡಲೇ ತ್ವರಿತವಾಗಿ ಜಮೀನಿನ ದಾಖಲಾತಿಗಳನ್ನು ನೀಡಲು ತಹಶೀಲ್ದಾರ ಕಛೇರಿಯಲ್ಲಿ ರೈತರಿಗೂ/ಸಾರ್ವಜನಿಕರಿಗೂ ತುಂಬಾ ತೊಂದರೆ ಅನುಭವಿಸುತ್ತಿರುವುದರಿಂದ ಕೂಡಲೇ ಬೇಜವಾಬ್ದಾರಿ ಅಧಿಕಾರಿ/ಸಿಬ್ಬಂದಿಗಳ ವರ್ತನೆ ವಿರುದ್ಧ ಯಾವ ಕ್ರಮ ಜರುಗಿಸಲಾಗುವುದು ; (ಮಾಹಿತಿ ನೀಡುವುದು)

(ಈ) ಬೀದರ್ ಜಿಲ್ಲೆಯಲ್ಲಿ ಜಾತಿ ಪ್ರಮಾಣ ಪತ್ರ ಹಾಗೂ ಆದಾಯ , ಇತರೆ ಪ್ರಮಾಣ ಪತ್ರ ಪಡೆದುಕೊಳ್ಳಲು ಆಗುತ್ತಿರುವ ತೊಂದರೆಗಳೇನು ; ಮತ್ತು ತೊಂದರೆ ಆಗದಂತೆ ಸರ್ಕಾರವು ಯಾವ ಯಾವ ಕ್ರಮ ಕೈಗೊಳ್ಳುವುದು ? (ಸಂಪೂರ್ಣ ಮಾಹಿತಿ ನೀಡುವುದು)